# All India Radio: Bangalore
# Regional Bulletin In Kannada
# 20.04.2025 / 2.30 p.m.
### ಆಕಾಶವಾಣಿ ಬೆಂಗಳೂರು
### ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಬೆಳಗಾವಿಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಸರ್ಕಾರ ಚಾಲನೆ

೨. ಜಾತಿ ಗಣತಿ ವಿಚಾರ; ಎಲ್ಲ ಸಚಿವರ ಅಭಿಪ್ರಾಯ ಪಡೆದ ಬಳಿಕವೇ ಅಂತಿಮ ತೀರ್ಮಾನ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಜಾತಿ ಗಣತಿ ವರದಿಯ ಮೂಲ ಪ್ರತಿ ಇನ್ನು ಪತ್ತೆಯಾಗಿಲ್ಲ - ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ

೪. ಸಿಇಟಿ ಪರೀಕ್ಷೆಯಲ್ಲಿ ಜನಿವಾರ ನಿಷೇಧ ಪ್ರಕರಣ; ತಪ್ಪಿತಸ್ಥ ಅಧಿಕಾರಿಗಳ ವಜಾ

೫. ಐಪಿಎಲ್ ಕ್ರಿಕೆಟ್ ಟೂರ್ನಿ; ಚಂಡೀಗಢದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಪಂಜಾಬ್ ಕಿಂಗ್ಸ್ ಮುಖಾಮುಖಿ

***************

ಸ್ಮಾರ್ಟ್ ಸಿಟಿ ಯೋಜನೆಯಡಿ ಬೆಳಗಾವಿ ನಗರದ ಟಿಳಕವಾಡಿಯಲ್ಲಿ ನಿರ್ಮಿಸಲಾದ ಅತ್ಯಾಧುನಿಕ ಸೌಲಭ್ಯವುಳ್ಳ ಬಹುಮಡಿ ಕಟ್ಟಡ ಸಂಕೀರ್ಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಲೋಕಾರ್ಪಣೆಗೊಳಿಸಿದರು. ಇದೇ ಸಂದರ್ಭದಲ್ಲಿ, ವಿಕಲಚೇತನರಿಗೆ ಯಂತ್ರಚಾಲಿ ಕುರ್ಚಿಗಳು, ಮಹಾನಗರ ಪಾಲಿಕೆ ಪೌರಕಾರ್ಮಿಕರಿಗೆ ಕಿಟ್ ಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ, ಎಲ್ಲ ಪೌರಕಾರ್ಮಿಕರ ಸೇವೆಯನ್ನು ಖಾಯಂಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು. ಬೆಳಗಾವಿಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆಯಡಿಯಲ್ಲಿ ೬ ಸಾವಿರದ ೯೨೮ ಕೋಟಿ ಮೊತ್ತದ ಕೆಲಸಗಳು ನಡೆಯುತ್ತಿವೆ ಎಂದು ಹೇಳಿದರು. ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮಿ ಹೆಬ್ಬಾಳ್ಕರ್ , ಎನ್. ಚಲುವರಾಯಸ್ವಾಮಿ ಸೇರಿದಂತೆ ಅನೇಕ ಜನಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಬಳಿಕ ಮುಖ್ಯಮಂತ್ರಿ ಸಿದ್ಧರಾಮಯ್ಯ ಸುವರ್ಣ ಸೌಧದ ಎದುರು ಆಯೋಜಿಸಲಾದ ಕಾರ್ಯಕ್ರಮದಲ್ಲಿ ಬೆಳಗಾವಿ ವಿಭಾಗ ಮಟ್ಟದ ಕೃಷಿ ಇಲಾಖೆಯ ಸಹಾಯಧನದ ಅಡಿಯಲ್ಲಿ ರೈತರಿಗೆ ವಿವಿಧ ಸವಲತ್ತುಗಳನ್ನು ವಿತರಣೆ ಮಾಡಲಿದ್ದಾರೆ.

***************

ಮುಸಲ್ಮಾನರಿಗೆ, ಹಿಂದುಳಿದವರಿಗೆ ಮಾತ್ರವಲ್ಲದೆ, ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೆ ಶಿಕ್ಷಣ ಸಿಗುವುದರ ಜೊತೆಗೆ ಸಾಮಾಜಿಕ ಆರ್ಥಿಕ ಶಕ್ತಿ ತುಂಬುವುದು ಸರ್ಕಾರದ ಗುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯ ಮೂಲ ಪ್ರತಿ ಮುಖ್ಯಮಂತ್ರಿಗಳ ಬಳಿಯಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿ ಮೂಲ ಪ್ರತಿ ನನ್ನ ಬಳಿಯಿರಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. ರಾಹುಲ್ ಗಾಂಧಿಯವರಿಗೆ ಈ ಕುರಿತಂತೆ ಯಾವುದೇ ಪತ್ರ ಬರೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಜಾತಿ ಗಣತಿ ಬಗ್ಗೆ ಎಲ್ಲಾ ಸಚಿವರು ಅಭಿಪ್ರಾಯ ತಿಳಿಸಿದ ಬಳಿಕ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ ಅಂತಿಮ ತೀರ್ಮಾನಕ್ಕೆ ಬರಲಾಗುವುದು ಎಂದು ತಿಳಿಸಿದ್ದಾರೆ.

***************

ಕಳೆದು ಹೋಗಿರುವ ಜಾತಿ ಗಣತಿ ವರದಿಯ ಮೂಲ ಪ್ರತಿ ಇನ್ನು ಪತ್ತೆಯಾಗಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮೂಲ ಜಾತಿ ಗಣತಿಯಲ್ಲಿ ಏನಿತ್ತು ಎಂಬುದು ಯಾರಿಗೂ ಗೊತ್ತಿಲ್ಲ ಎಂದು ತಿಳಿಸಿದ್ದಾರೆ. ಜಾತಿ ಗಣತಿ ವರದಿಯನ್ನು ತರಾತುರಿಯಲ್ಲಿ ಮುನ್ನೆಲೆಗೆ ತರಲು ಹೊರಟಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನಡೆ ಕುತೂಹಲಕಾರಿಯಾಗಿದೆ ಎಂದು ಹೇಳಿದ್ದಾರೆ.

***************

ರಾಜ್ಯಾದ್ಯಂತ ವಿವಾದಕ್ಕೆ ಕಾರಣವಾಗಿರುವ ಸಿಇಟಿ ಪ್ರವೇಶ ಪರೀಕ್ಷೆ ಜನಿವಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ ಬೀದರ್ ಸಾಯಿ ಸ್ಫೂರ್ತಿ ಕಾಲೇಜಿನ ಇಬ್ಬರು ಸಿಬ್ಬಂದಿಯನ್ನು ಕಾಲೇಜು ಆಡಳಿತ ಮಂಡಳಿ ವಜಾ ಮಾಡಿದೆ. ಜನಿವಾರದ ಕಾರಣಕ್ಕೆ ಸಿಇಟಿ ಪರೀಕ್ಷೆ ಬರೆಯಲು ವಿದ್ಯಾರ್ಥಿಗೆ ಅವಕಾಶ ನಿರಾಕರಿಸಿದ ಕೇಂದ್ರದ ಪ್ರಾಂಶುಪಾಲರು ಹಾಗೂ ಹಿರಿಯ ಸಹಾಯಕ ಸಿಬ್ಬಂದಿಯನ್ನು ವಜಾಗೊಳಿಸಲಾಗಿದೆ. ಪ್ರಕರಣದ ತನಿಖೆ ನಡೆಸಿರುವ ಬೀದರ್ ಜಿಲ್ಲಾಧಿಕಾರಿ ಹಾಗೂ ಪರೀಕ್ಷಾ ಪ್ರಾಧಿಕಾರ ನೀಡಿರುವ ಆದೇಶದನ್ವಯ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಫೂರ್ತಿ ಕಾಲೇಜು ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ. ಈ ಮಧ್ಯೆ, ಸಿಇಟಿ ಪರೀಕ್ಷೆ ಬರೆಯಲು ಅವಕಾಶ ಸಿಗದ ಬೀದರ್ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಮನೆಗೆ ಇಂದು ಜಿಲ್ಲಾ ಉಸ್ತುವಾರಿ ಸಚಿವ ಬಿ ಈಶ್ವರ್ ಖಂಡ್ರೆ ಹಾಗೂ ಸಚಿವ ರಹೀಂಖಾನ್ ಭೇಟಿ ನೀಡಿದ್ದರು. ಸುಚಿವ್ರತ್ ಕುಲಕರ್ಣಿಗೆ ಧೈರ್ಯ ತುಂಬಿದ ಸಚಿವ ಈಶ್ವರ್ ಖಂಡ್ರೆ ಭಾಲ್ಕಿಯ ಭೀಮಣ್ಣ ಖಂಡ್ರೆ ತಾಂತ್ರಿಕ ವಿದ್ಯಾಲಯದಲ್ಲಿ ಅವರಿಗೆ ಉಚಿತ ಪ್ರವೇಶ ನೀಡುವುದಾಗಿ ಭರವಸೆ ನೀಡಿದ್ದಾರೆ.

***************

ನಮಗೆ ಧರ್ಮ ಬೇಕು, ಜೊತೆಗೆ ಧರ್ಮವನ್ನು ಕಾಪಾಡಬೇಕು" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಧರ್ಮಸ್ಥಳದಲ್ಲಿ ಮಂಜುನಾಥ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಕರಾವಳಿ ನಮ್ಮ ರಾಜ್ಯದ ಮುಖ್ಯವಾದ ಅಂಗ. ಮನುಷ್ಯನಿಗೆ ದೇಹದ ಅಂಗಗಳು ಎಷ್ಟು ಮುಖ್ಯವೋ, ಕರಾವಳಿ ಭಾಗವೂ ಅಷ್ಟೇ ಮುಖ್ಯ" ಎಂದು ಹೇಳಿದ್ದಾರೆ.

***************

ಮಕ್ಕಳಿಗೆ ಪರಿಸರದ ಬಗ್ಗೆ ಕಾಳಜಿ ಮತ್ತು ಪ್ಲಾಸ್ಟಿಕ್ ಬಳಕೆ ಕುರಿತು ಹೆಚ್ಚು ತಿಳುವಳಿಕೆ ನೀಡಬೇಕಾದ ಅಗತ್ಯವಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆಯಲ್ಲಿಂದು ಜವಾಹರ್ ಬಾಲ್ ಮಂಚ್ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಮಕ್ಕಳೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಳೆನೀರು ಸಂಗ್ರಹ, ಪರಿಸರ ಸ್ವಚ್ಛತೆ ಮತ್ತು ಪ್ಲಾಸ್ಟಿಕ್ ಬಳಕೆಯನ್ನು ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಮಕ್ಕಳಿಗೆ ಹೆಚ್ಚು ಮಾಹಿತಿ ನೀಡಬೇಕು ಎಂದು ತಿಳಿಸಿದ್ದಾರೆ. ಮಕ್ಕಳೋತ್ಸವದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ೨೦೦ಕ್ಕೂ ಅಧಿಕ ಮಕ್ಕಳು ಭಾಗವಹಿಸಿದ್ದರು. ಇಲ್ಲಿ ವಿಜೇತರಾದ ಮಕ್ಕಳು ಜೈಪುರದಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಮಕ್ಕಳೋತ್ಸವದಲ್ಲಿ ಭಾಗವಹಿಸಲಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾ ಮಂಡಳಿ ಸಹಯೋಗದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ನಾಳೆಯಿಂದ ಜೂನ್ ೪ ರವರೆಗೆ ಜಿಲ್ಲೆಯಾದ್ಯಂತ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಮತ್ತು ಚರ್ಮ ಗಂಟು ರೋಗದ ಲಸಿಕಾ ಅಭಿಯಾನ ನಡೆಯಲಿದೆ. ಲಸಿಕೆ ಹಾಕುವವರು ಮನೆ ಬಾಗಿಲಿಗೆ ಭೇಟಿ ನೀಡಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ. ತಪ್ಪದೇ ರೈತರು ಜಾನುವಾರುಗಳಿಗೆ ಲಸಿಕೆ ಹಾಕಿಸಿ ಜಾನುವಾರುಗಳಿಗೆ ರೋಗ ಬರದಂತೆ ತಡೆಯಬೇಕಿದೆ ಎಂದು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಜಗದೀಶ್ ಕುಮಾರ್ ತಿಳಿಸಿದ್ದಾರೆ.

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಈ ತಿಂಗಳ ಕೊನೆ ಭಾನುವಾರ, ೨೭ ರಂದು, ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ.  ಇದು ಮನದ ಮಾತಿನ ೧೨೧ನೇ ಸಂಚಿಕೆಯಾಗಿದೆ.  ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಅಥವಾ ಮೋದಿ ಅಪ್ಲಿಕೇಶನ್ ಅಥವಾ ಮೈ ಗಾವ್ ಓಪನ್ ಫೋರಂ ಮೂಲಕ, ಜನತೆ ಆನ್‌ಲೈನ್‌ನಲ್ಲಿ, ಈ ತಿಂಗಳ ೨೫ರ ವರೆಗೆ, ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು.

***************

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಚಂಡೀಗಢದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಸೆಣಸಲಿವೆ. ಪಂದ್ಯ ಮಧ್ಯಾಹ್ನ ೩:೩೦ ಕ್ಕೆ ಆರಂಭವಾಗಲಿದೆ. ಉಭಯ ತಂಡಗಳು ಒಂದೇ ದಿನದ ಅಂತರದಲ್ಲಿ ಎರಡನೇ ಬಾರಿ ಮುಖಾಮುಖಿಯಾಗುತ್ತಿವೆ. ಅಂಕಪಟ್ಟಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಐದನೇ ಸ್ಥಾನಕ್ಕೆ ತಲುಪಿದೆ.

***************

ಸಂಕ್ಷಿಪ್ತ ಸುದ್ದಿಗಳು

೧. ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ಪ್ರಚುರ ಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆಗೆ ಚಿತ್ರದುರ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಇಂದು ಚಾಲನೆ ನೀಡಿದರು.

೨. ಹಾವೇರಿ ಜಿಲ್ಲೆಯ ೬ ಪರೀಕ್ಷಾ ಕೇಂದ್ರಗಳಲ್ಲಿ ಇದೇ ೨೪ರಿಂದ ಮೇ ೮ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ೨ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲಿನ ೨೦೦ ಮೀಟರ್ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿ ಮಾಡಿ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ಆದೇಶ ಹೊರಡಿಸಿದ್ದಾರೆ.

೩. ಸ್ಥಳೀಯ ಸಂಸ್ಥೆಗಳಿಂದ ರೆಡ್ ಕ್ರಾಸ್‌ಗೆ ನಿಯಮ ಪ್ರಕಾರ ಸಲ್ಲಬೇಕಾದ ಶುಲ್ಕವನ್ನು ವಿಳಂಬರಹಿತವಾಗಿ ಪಡೆದುಕೊಂಡು ಉತ್ತಮ ಯೋಜನೆಗಳಿಗೆ ಬಳಸಿಕೊಳ್ಳುವಂತೆ ಭಾರತೀಯ ರೆಡ್ ಕ್ರಾಸ್ ಸೊಸೈಟಿಯ ಕರ್ನಾಟಕ ರಾಜ್ಯದ ಅಧ್ಯಕ್ಷ ಬಸ್ರೂರು ರಾಜೀವ್ ಶೆಟ್ಟಿ ಸೂಚಿಸಿದ್ದಾರೆ.

೪. ವಿಕಲಚೇತನರಿಗೆ ಎಲ್ಲಾ ಇಲಾಖೆಗಳಲ್ಲಿನ ಅನುದಾನದಲ್ಲಿ ಶೇ.೫ ರಷ್ಟು ಮೀಸಲಾತಿ ನೀಡಬೇಕು ಎಂದು ಬಿಜೆಪಿಯ ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೋರಿರುವುದಾಗಿ ಬಳ್ಳಾರಿಯಲ್ಲಿ ಹೇಳಿದ್ದಾರೆ.

೫. ಪ್ರಕೃತಿ ಸಂರಕ್ಷಣೆ ಎಲ್ಲಾ ಭಾರತೀಯ ನಾಗರೀಕರ ಹೊಣೆಯಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಕುಮಾರ ಹೇಳಿದ್ದಾರೆ. ಮನುಷ್ಯ ತನ್ನ ಆಸೆಗಾಗಿ ಭೂ ಸಂಪತ್ತನ್ನು ಲೂಟಿ ಮಾಡಿ, ಪ್ರಕೃತಿಯನ್ನು ವಿನಾಶದತ್ತ ಕೊಂಡೊಯ್ಯುತ್ತಿದ್ದಾನೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

*******ಮುಕ್ತಾಯ*******